# ಕರ್ನಾಟಕ ವಿದ್ಯುತ್ ನಿಗಮ ನಿಯಮಿತ

(ಕರ್ನಾಟಕ ಸರ್ಕಾರದ ಉದ್ದಿಮೆ)

CIN: U85110KA1970SGC001919

ಪ್ರಧಾನ ಕಛೇರಿ: ನಂ.82, ಶಕ್ತಿಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು–560 001

ವೆಬ್‌ಸೈಟ್: https://kpcl.karnataka.gov.in

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 26.12.2025 (ಸಂಜೆ 5.00 ಗಂಟೆ ವರೆಗೆ)

**ಸಂಖ್ಯೆ: ಎ1ಪಿ1ಸಿ(ಬಿಎಲ್)/ಎಸ್‌ಹೆಚ್‌ಕೆ** **ದಿನಾಂಕ: 27.11.2025**

## ನೇಮಕಾತಿ ಅಧಿಸೂಚನೆ

1970ನೇ ಇಸ್ವಿಯಲ್ಲಿ ಸ್ಥಾಪಿತವಾದ ಕರ್ನಾಟಕ ವಿದ್ಯುತ್ ನಿಗಮ ನಿಯಮಿತವು (ಕೆಪಿಸಿಎಲ್) ಕರ್ನಾಟಕ ಸರ್ಕಾರದ ಉದ್ದಿಮೆಯಾಗಿದ್ದು, ವಿದ್ಯುತ್ ಉತ್ಪಾದನೆಯಲ್ಲಿ ಮುಂಚೂಣಿಯಲ್ಲಿರುವ ಮತ್ತು ವೃತ್ತಿಪರತೆ ಹಾಗೂ ತಜ್ಞತೆಯಿಂದ ಕಾರ್ಯ ನಿರ್ವಹಿಸುತ್ತಿರುವ ಅಗ್ರಮಾನ್ಯ ಸಂಸ್ಥೆಯಾಗಿದೆ.

ಪ್ರಸ್ತುತ ಕರ್ನಾಟಕ ವಿದ್ಯುತ್ ನಿಗಮ ನಿಯಮಿತ(ಕೆಪಿಸಿಎಲ್)ದಲ್ಲಿ ಖಾಲಿ ಇರುವ 'ಎ' ದರ್ಜೆಯ ವಿವಿಧ ಮಿಕ್ಕುಳಿದ ವೃಂದದ (**Non Hyderabad Karnataka**) ಬ್ಯಾಕ್‌ಲಾಗ್ (**Backlog**) ಹುದ್ದೆಗಳು ಕರ್ನಾಟಕ ನಾಗರೀಕ ಸೇವೆಗಳ (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಗೆ ಮೀಸಲಾದ ಭರ್ತಿ ಮಾಡದ ಖಾಲಿ ಹುದ್ದೆಗಳು) (ವಿಶೇಷ ನೇಮಕಾತಿ) ನಿಯಮಗಳು–2001 ಹಾಗೂ ನಿಗಮದ ವೃಂದ ಮತ್ತು ನೇಮಕಾತಿ ನಿಬಂಧನೆಗಳನ್ವಯ ಭರ್ತಿ ಮಾಡಲು ಉದ್ದೇಶಿಸಲಾಗಿದೆ. ಆದುದರಿಂದ ಈ ಕೆಳಕಂಡ ಹುದ್ದೆಗಳಿಗೆ ಪರಿಶಿಷ್ಟ ಜಾತಿ (**Schedule Caste**) ಮತ್ತು ಪರಿಶಿಷ್ಟ ಪಂಗಡ (**Schedule Tribe**) ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

---

1. **ಕರ್ನಾಟಕ ವಿದ್ಯುತ್ ನಿಗಮ ನಿಯಮಿತದ ವಿದ್ಯುತ್ ಯೋಜನಾ ಪ್ರದೇಶಗಳಿಗೆ ಈ ಕೆಳಕಂಡ ಬ್ಯಾಕ್‌ಲಾಗ್ ಹುದ್ದೆಗಳಿಗೆ ಅರ್ಜಿಗಳನ್ನು ಆಹ್ವಾನಿಸಿದೆ.**

   **ಅನುಚ್ಛೇದ 371(ಜೆ) ಅಡಿಯಲ್ಲಿ ಹೈದರಾಬಾದ್–ಕರ್ನಾಟಕ ಪ್ರದೇಶ ಹೊರತುಪಡಿಸಿದ (ಮಿಕ್ಕುಳಿದ ವೃಂದ)ದ ಅಭ್ಯರ್ಥಿಗಳಿಗೆ ಗುರುತಿಸಲಾದ ಹುದ್ದೆಗಳು:**

| ಕ್ರಮ ಸಂಖ್ಯೆ | ಹುದ್ದೆ ಸಂಕೇತ | ಹುದ್ದೆ ಮತ್ತು ನಿಗದಿಪಡಿಸಿದ ವಿದ್ಯಾರ್ಹತೆ | ಒಟ್ಟು ಸಂಖ್ಯೆ | ವರ್ಗ | ಹುದ್ದೆಗಳ ಸಂಖ್ಯೆ |
|---|---|---|---|---|---|
| 1 | FN | **ಫ್ಯಾಕ್ಟರಿ ಮೆಡಿಕಲ್ ಆಫೀಸರ್**<br>**ಅವಶ್ಯ:–**<br>i) ಕರ್ನಾಟಕದಲ್ಲಿನ ಅಂಗೀಕೃತ ಸಂಸ್ಥೆ/ಕಾಲೇಜಿನಲ್ಲಿ ವೈದ್ಯಶಾಸ್ತ್ರ ಮತ್ತು ಶಸ್ತ್ರಚಿಕಿತ್ಸೆಯಲ್ಲಿ ಸ್ನಾತಕ ಪದವಿ (MBBS- Regular) **ಮತ್ತು**<br>ii)ರಾಜ್ಯ ಸರ್ಕಾರದಿಂದ ಅಂಗೀಕೃತಗೊಂಡಿರುವ ಕೈಗಾರಿಕಾ ಸ್ವಾಸ್ಥ್ಯದಲ್ಲಿ ಕನಿಷ್ಠ ಮೂರು ತಿಂಗಳ ತರಬೇತಿ ಹೊಂದಿರಬೇಕು. **ಮತ್ತು**<br>iii)ಖಾಸಗಿ ಅಥವಾ ಮಾನ್ಯತೆ ಪಡೆದ ವೈದ್ಯಕೀಯ ಸಂಸ್ಥೆ/ ಆರೋಗ್ಯ ಕೇಂದ್ರಗಳಲ್ಲಿ ಎರಡು ವರ್ಷಗಳ ಅನುಭವ(ಇಂಟರ್ನ್‌ಶಿಪ್ ತರಬೇತಿ ಹೊರತುಪಡಿಸಿ)<br>**ಸೂಚನೆ:–**<br>ಎ)ಸ್ನಾತಕೋತ್ತರ ಪದವಿಯನ್ನು ಅನುಭವ ಎಂದು ಪರಿಗಣಿಸಲಾಗುವುದಿಲ್ಲ.<br>ಬಿ)ಕೈಗಾರಿಕಾ ಸ್ವಾಸ್ಥ್ಯದಲ್ಲಿ ಡಿಪ್ಲೋಮಾ ವ್ಯಾಸಂಗ ಮಾಡಿರುವ ಅಥವಾ ತತ್ಸಮಾನ ಪ್ರಮಾಣ ಪತ್ರವನ್ನು ಹೊಂದಿರುವವರಿಗೆ ಕ್ರ.ಸಂ(ii)ರಲ್ಲಿ ಸೂಚಿಸಿರುವ ಮೂರು ತಿಂಗಳ ಕೈಗಾರಿಕಾ ಸ್ವಾಸ್ಥ್ಯದಲ್ಲಿ ತರಬೇತಿಯ ಅವಶ್ಯಕತೆ ಇರುವುದಿಲ್ಲ. ಕೈಗಾರಿಕಾ ಸ್ವಾಸ್ಥ್ಯದಲ್ಲಿ ಪಡೆದ ಡಿಪ್ಲೋಮಾ ಪ್ರಮಾಣ ಪತ್ರವನ್ನು ದಾಖಲೆಗಳ ಪರಿಶೀಲನೆ ಸಮಯದಲ್ಲಿ ಹಾಜರು ಪಡಿಸತಕ್ಕದ್ದು. | **02**<br>(ಬ್ಯಾಕ್‌ಲಾಗ್) | ಎಸ್‌ಸಿ (ಇತರೆ)<br>ಎಸ್‌ಟಿ (ಇತರೆ) | 01<br>01 |

| ಕ್ರಮ ಸಂಖ್ಯೆ | ಹುದ್ದೆ ಸಂಕೇತ | ಹುದ್ದೆ ಮತ್ತು ನಿಗದಿಪಡಿಸಿದ ವಿದ್ಯಾರ್ಹತೆ | ಒಟ್ಟು ಸಂಖ್ಯೆ | ವರ್ಗ | ಹುದ್ದೆಗಳ ಸಂಖ್ಯೆ |
|---|---|---|---|---|---|
| 2 | MN | **ಮೆಡಿಕಲ್ ಆಫೀಸರ್**<br>**ಅವಶ್ಯ :–**<br>1) ಕರ್ನಾಟಕದಲ್ಲಿನ ಅಂಗೀಕೃತ ಸಂಸ್ಥೆ/ಕಾಲೇಜಿನಲ್ಲಿ ವೈದ್ಯಶಾಸ್ತ್ರ ಮತ್ತು ಶಸ್ತ್ರಚಿಕಿತ್ಸೆ ವಿಷಯದಲ್ಲಿ ಸ್ನಾತಕ ಪದವಿ (MBBS) **ಮತ್ತು**<br>2) ಖಾಸಗಿ ಅಥವಾ ಮಾನ್ಯತೆ ಪಡೆದ ವೈದ್ಯಕೀಯ ಸಂಸ್ಥೆ/ಆರೋಗ್ಯ ಕೇಂದ್ರಗಳಲ್ಲಿ ಇಂಟರ್ನ್‌ಶಿಫ್ ತರಬೇತಿ ಜೊತೆಗೆ ಎರಡು ವರ್ಷಗಳ ಉದ್ಯೋಗ ಅನುಭವ<br>**ಸೂಚನೆ:– ಸ್ನಾತಕೋತ್ತರ ವಿದ್ಯಾರ್ಹತೆಯನ್ನು ಅನುಭವ ಎಂದು ಪರಿಗಣಿಸಲಾಗುವುದಿಲ್ಲ.** | **01**<br>(ಬ್ಯಾಕ್‌ಲಾಗ್) | **ಎಸ್‌ಟಿ**<br>**(ಇತರೆ)** | **01** |
| 3 | AN | **ಅಕೌಂಟ್ಸ್ ಆಫೀಸರ್**<br>**ಅವಶ್ಯ :–**<br>ಪ್ರಥಮ ದರ್ಜೆಯಲ್ಲಿ ಪದವಿಯ ಜೊತೆಗೆ ಮೆಂಬರ್‌ಶಿಫ್ ಆಫ್ ಇನ್‌ಸ್ಟಿಟ್ಯೂಟ್ ಆಫ್ ಕಾಸ್ಟ್ ಅಂಡ್ ವರ್ಕ್ಸ್ ಅಕೌಂಟ್ಸ್ ಆಫ್ ಇಂಡಿಯಾ (ICWA) ಅಥವಾ ಚಾರ್ಟರ್ಡ್ ಅಕೌಂಟೆಂಟ್ (CA) ಕೋರ್ಸ್‌ನಲ್ಲಿ ತೇರ್ಗಡೆ ಹೊಂದಿರಬೇಕು.<br>**ಅಪೇಕ್ಷಣಿಯ:–**<br>ಹೆಸರಾಂತ ಬೃಹತ್ ಸಾರ್ವಜನಿಕ/ಖಾಸಗಿ ಉದ್ದಿಮೆಯಲ್ಲಿ ಎಕ್ಸಿಕ್ಯೂಟಿವ್ ಆಗಿ ಕಂಪೈಲಿಂಗ್ ಅಂಡ್ ಅನಾಲಿಸಿಸ್ ಕಾಸ್ಟ್ ಡಾಟಾ (Compiling and Analysis cost data)ನಲ್ಲಿ ಎರಡು ವರ್ಷಗಳ ಅನುಭವ. | **01**<br>(ಬ್ಯಾಕ್ ಲಾಗ್) | **ಎಸ್‌ಟಿ**<br>**(ಇತರೆ)** | **01** |

**2. ಅರ್ಜಿಯನ್ನು ಸಲ್ಲಿಸಲು ಅನುಸರಿಸಬೇಕಾದ ವಿಧಾನ:**

ಅಭ್ಯರ್ಥಿಗಳು ನಿಗಮದ ವೆಬ್‌ಸೈಟ್ **https://kpcl.karnataka.gov.in** ನಲ್ಲಿ ಲಭ್ಯವಿರುವ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ವಿದ್ಯಾರ್ಹತೆ ಮತ್ತು ಅನುಭವಕ್ಕೆ ಸಂಬಂಧಪಟ್ಟ ದಾಖಲೆಗಳನ್ನು (ಸ್ವಯಂ ದೃಢೀಕೃತ) ಲಗತ್ತಿಸಿ **kpclbacklog@gmail.com** ಇ–ಮೇಲ್‌ಗೆ ದಿನಾಂಕ **26.12.2025 ಸಂಜೆ 5:00 ಗಂಟೆ** ರೊಳಗಾಗಿ ಸಲ್ಲಿಸತಕ್ಕದ್ದು. ನಿಗದಿತ ಸಮಯ/ದಿನಾಂಕದ ನಂತರ ಸ್ವೀಕೃತಗೊಂಡ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಇತರೆ ಯಾವುದೇ ನಮೂನೆಯಲ್ಲಿ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.

**ಅರ್ಜಿ ಶುಲ್ಕ** [Non-Refundable]: **ರೂ.100/–**

**ಪಾವತಿ ಮಾಡುವ ವಿಧಾನ:**

- ಅರ್ಜಿದಾರರು ಅರ್ಜಿ ಶುಲ್ಕವನ್ನು ಕರ್ನಾಟಕ ವಿದ್ಯುತ್ ನಿಗಮ ನಿಯಮಿತದ ಈ ಕೆಳಕಂಡ ಖಾತೆ ಸಂಖ್ಯೆಗೆ ಪಾವತಿ ಮಾಡಬಹುದು.

Beneficiary Name : **KARNATAKA POWER CORPORATION LTD**
Bank : **STATE BANK OF INDIA**
Type of A/c : **Cash Credit (Current)**
A/c No. : **10503342643**
IFSC Code: **SBIN0009077**
Branch : **IFB Branch, Residency Plaza, Residency Road, Bangalore - 01**

- ಅರ್ಜಿ ಶುಲ್ಕವನ್ನು ಪಾವತಿ ಮಾಡಿದ ನಂತರ ಬ್ಯಾಂಕನವರು ಒದಗಿಸಿದ ಉಲ್ಲೇಖ ಸಂಖ್ಯೆಯನ್ನು, ಅರ್ಜಿಯಲ್ಲಿ ಒದಗಿಸಿರುವ ಸೂಕ್ತ ಸ್ಥಳದಲ್ಲಿ ಕಡ್ಡಾಯವಾಗಿ ಭರ್ತಿ ಮಾಡತಕ್ಕದ್ದು.

**ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 26.12.2025 ರ ಸಂಜೆ 5.00 ಘಂಟೆ ವರೆಗೆ**

**ಸೂಚನೆ:**

- ಅರ್ಜಿ ಶುಲ್ಕವನ್ನು ಪಾವತಿಸಿದ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು.
- ಒಂದು ವೇಳೆ ಒಂದೇ ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿ ಪ್ರತ್ಯೇಕವಾಗಿ ಅರ್ಜಿ ಶುಲ್ಕವನ್ನು ಪಾವತಿಸಿದ್ದಲ್ಲಿ ಅಭ್ಯರ್ಥಿಯು ಆ ಹುದ್ದೆಗೆ ಸಲ್ಲಿಸಿದ ಕೊನೆಯ ಅರ್ಜಿಯನ್ನು ನೇಮಕಾತಿಯ ಮುಂದಿನ ಕ್ರಮಕ್ಕಾಗಿ ಪರಿಗಣಿಸಲಾಗುವುದು ಹಾಗೂ ಬಾಕಿ ಉಳಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

## 3. ಅರ್ಹತಾ ಷರತ್ತುಗಳು:

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರ/ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

ಇ) ಅಭ್ಯರ್ಥಿಗಳು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತವಾಗಿರಬೇಕು.

ಈ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ರಾಜ್ಯ ಸರ್ಕಾರದ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಕೆಪಿಸಿಎಲ್‌ವು ಕಾಯ್ದಿರಿಸಿಕೊಂಡಿದೆ ಮತ್ತು ನಿಗಮದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

ಉ) ಕೇಂದ್ರ ಅಥವಾ ಕರ್ನಾಟಕ ಅಥವಾ ಇತರೆ ರಾಜ್ಯದ ಲೋಕ ಸೇವಾ ಆಯೋಗದಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ಖಾಯಂ ಆಗಿ ಡಿಬಾರ್‌ಆದ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

ಊ) ನೈತಿಕ ದುರ್ನಡತೆಯಿಂದಾಗಿ/ ನೀತಿಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೆ ಒಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ/ ಕೇಂದ್ರ/ ಸ್ಥಳೀಯ ಸಂಸ್ಥೆ/ ಕೈಗಾರಿಕಾ/ ವಾಣಿಜ್ಯಕ್ಕೆ ಸಂಬಂಧಪಟ್ಟ ಅಥವಾ ಇನ್ನಿತರೆ ಸರ್ಕಾರದ ಅಧೀನದಲ್ಲಿರುವ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ/ ನೀತಿ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯ ಬದಲಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ/ ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ/ವಜಾ ಮಾಡಲ್ಪಟ್ಟಿದ್ದು ಕಂಡುಬಂದಲ್ಲಿ ನೇಮಕಾತಿಗೆ ಅನರ್ಹರಾಗುತ್ತಾರೆ.

## 4. ವಯೋಮಿತಿ:

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಕನಿಷ್ಠ **18 ವರ್ಷ** ವಯಸ್ಸನ್ನು ಪೂರೈಸಿರತಕ್ಕದ್ದು ಹಾಗೂ ಗರಿಷ್ಠ **40 ವರ್ಷ** ವಯಸ್ಸನ್ನು ಮೀರಿರಬಾರದು.

- ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವರು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುತ್ತಾರೋ ಅಷ್ಟು ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳ ಅವಧಿಗೆ ಸಮಾನವಾಗಿ ವಯೋಮಿತಿಯನ್ನು ಸಡಿಲಿಸಲಾಗಿದೆ.
- ವಿಕಲಚೇತನರು ಮತ್ತು ವಿಧವೆಯರಿಗೆ ಸಂಬಂಧಿಸಿದ ವರ್ಗದಲ್ಲಿ 10 ವರ್ಷಗಳ ವರೆಗೆ ವಯೋಮಿತಿ ಸಡಿಲಿಕೆ ಇರುತ್ತದೆ.
- ಅರ್ಜಿದಾರರ ವಯಸ್ಸನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಇರುವಂತೆ ಲೆಕ್ಕಹಾಕಲಾಗುವುದು.

## 5. ವೇತನ ಶ್ರೇಣಿಗಳು ಮತ್ತು ಭತ್ಯೆಗಳು:

I. **ವೇತನ ಶ್ರೇಣಿ :**

**ರೂ. 81210–2530–88800–2910–103350–3350–123450–3760–146010–4150–170910–4580–198390–5060–203450**

II. **ಸೌಲಭ್ಯಗಳು:** ನಿಗಮದ ನಿಯಮಾನುಸಾರ ತೈನಾತಿಯ ಸ್ಥಳಕ್ಕೆ ಅನ್ವಯವಾಗುವ ಸೌಲಭ್ಯಗಳನ್ನು ನೀಡಲಾಗುವುದು.

III. **ಪಿಂಚಣಿ:** ನಿಗಮದಲ್ಲಿ ದಿನಾಂಕ **01.04.2006** ರಿಂದ ಅನ್ವಯವಾಗುವಂತೆ ಚಾಲ್ತಿಯಲ್ಲಿರುವ **ನ್ಯೂ ಪೆನ್ಷನ್ ಸ್ಕೀಂ(ಎನ್‌ಪಿಎಸ್)** ಅನ್ವಯವಾಗುತ್ತದೆ.

## 6. ಖಾಯಂ ಪೂರ್ವ ಅವಧಿ/ಕನಿಷ್ಠ ಸೇವೆ/ನಿಯುಕ್ತಿ:

- ಫ್ಯಾಕ್ಟರಿ ಮೆಡಿಕಲ್ ಆಫೀಸರ್/ ಮೆಡಿಕಲ್ ಆಫೀಸರ್/ ಅಕೌಂಟ್ಸ್ ಅಫೀಸರ್ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳನ್ನು ನಿಗಮದ ವಿದ್ಯುತ್ ಯೋಜನಾ ಪ್ರದೇಶಗಳಿಗೆ ನಿಯೋಜಿಸಲಾಗುವುದು. ಅವರುಗಳು **ಒಂದು ವರ್ಷದವರೆಗೆ** ಖಾಯಂ ಪೂರ್ವ(Probation) ಅವಧಿಯಲ್ಲಿರುತ್ತಾರೆ.
- ಆಯ್ಕೆಯಾದ ಅಭ್ಯರ್ಥಿಗಳು ನಿಗಮದಲ್ಲಿ ಸೇವೆಗೆ ಸೇರಿದ ದಿನಾಂಕದಿಂದ ಕನಿಷ್ಠ 5 ವರ್ಷಗಳ ಸೇವೆಯನ್ನು ಅವಿರತವಾಗಿ (Continuously) ಸಲ್ಲಿಸುವುದಾಗಿ ರೂ.500/– (ಐದು ನೂರು ಮಾತ್ರ) ರ ಛಾಪಾ ಕಾಗದ (Non Judicial) ದಲ್ಲಿ ಒಪ್ಪಂದ ಮಾಡಿಕೊಳ್ಳಬೇಕು.
- ಫ್ಯಾಕ್ಟರಿ ಮೆಡಿಕಲ್ ಆಫೀಸರ್/ ಮೆಡಿಕಲ್ ಆಫೀಸರ್/ ಅಕೌಂಟ್ಸ್ ಆಫೀಸರ್ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳು ಯೋಜನಾ ಪ್ರದೇಶದಲ್ಲಿ ಸೇವೆಯನ್ನು ಸಲ್ಲಿಸುವುದಾಗಿ ಒಪ್ಪಂದ ಮಾಡಿಕೊಳ್ಳಬೇಕು.

## 7. ಆಯ್ಕೆ ವಿಧಾನ:

ಕಲಂ.1 ರಲ್ಲಿರುವ ಹುದ್ದೆಗೆ ನಿಗದಿಪಡಿಸಿರುವ ಅರ್ಹತಾದಾಯಕ ಪರೀಕ್ಷೆಗಳಲ್ಲಿ ಪಡೆದಿರುವ ಶೇಕಡಾವಾರು ಅಂಕಗಳನ್ನು ಒಟ್ಟುಗೂಡಿಸಿ ಅದರ ಶ್ರೇಯಾಂಕದ ಮತ್ತು ಜೇಷ್ಠತೆಯ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

| ಕ್ರಮ ಸಂಖ್ಯೆ | ಹುದ್ದೆ | ಆಯ್ಕೆ ವಿಧಾನ |
|---|---|---|
| 1 | **ಫ್ಯಾಕ್ಟರಿ ಮೆಡಿಕಲ್ ಆಫೀಸರ್ /ಮೆಡಿಕಲ್ ಆಫೀಸರ್** | ಕರ್ನಾಟಕದಲ್ಲಿನ ಅಂಗೀಕೃತ ವೈದ್ಯಕೀಯ ಸಂಸ್ಥೆ/ಕಾಲೇಜಿನಲ್ಲಿ ವೈದ್ಯಶಾಸ್ತ್ರ ಮತ್ತು ಶಸ್ತ್ರಚಿಕಿತ್ಸೆ (ಎಂಬಿಬಿಎಸ್) ವಿಷಯದಲ್ಲಿ ಸ್ನಾತಕ ಪದವಿಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.(ಎಲ್ಲಾ ವರ್ಷಗಳು/ಸೆಮಿಸ್ಟರ್‌ಗಳು) |
| 2 | **ಅಕೌಂಟ್ಸ್ ಆಫೀಸರ್** | ಅಭ್ಯರ್ಥಿಗಳ ಆಯ್ಕೆಯನ್ನು ಸ್ನಾತಕ ಪದವಿಯಲ್ಲಿ ಗಳಿಸಿದ ಸರಾಸರಿ ಅಂಕಗಳಲ್ಲಿ **ಶೇ 25%** (ಎಲ್ಲಾ ವರ್ಷ/ ಸೆಮಿಸ್ಟರ್ ಭಾಷೆಗಳು ಸೇರಿದಂತೆ) ಮತ್ತು ಇನ್‌ಸ್ಟಿಟ್ಯೂಟ್ ಅಫ್ ಕಾಸ್ಟ್ ಅಂಡ್ ವರ್ಕ್ಸ್ ಅಕೌಂಟ್ಸ್ ಅಫ್ ಇಂಡಿಯಾ (ಐಸಿಡಬ್ಲ್ಯೂಎ) ಅಥವಾ ಚಾರ್ಟರ್ಡ್ ಅಕೌಂಟೆಂಟ್ ಪದವಿಯಲ್ಲಿ ಗಳಿಸಿದ ಸರಾಸರಿ ಅಂಕಗಳಲ್ಲಿ **ಶೇ 75%** ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. |

Note: i) ಒಂದುವೇಳೆ ಅಭ್ಯರ್ಥಿಗಳು ಅವರ ಶೈಕ್ಷಣಿಕ ಪರೀಕ್ಷೆಯಲ್ಲಿ CGPA ಆಧಾರದ ಮೇಲೆ ಗ್ರೇಡ್ ಪಡೆದಿರುವ ಸಂದರ್ಭದಲ್ಲಿ ಅಂತಹವರು ಅಧ್ಯಯನ ಮಾಡಿದ ವಿಶ್ವವಿದ್ಯಾನಿಲಯ/ವಿದ್ಯಾಲಯವು ಅಂಗೀಕರಿಸಿದ ಮಾದರಿ/ತತ್ವದ ಆಧಾರದಲ್ಲಿ ಸರಾಸರಿ ಅಂಕವನ್ನಾಗಿ ಪರಿವರ್ತಿಸಿ ಅಂತಹ ಅಂಕವನ್ನು ಅರ್ಜಿಯಲ್ಲಿ ಭರ್ತಿ ಮಾಡತಕ್ಕದ್ದು. ಹೀಗೆ ಅವರು ಅನುಸರಿಸುವ ಮಾದರಿಯ ಸೂಕ್ತ ದಾಖಲೆಯನ್ನು ಅಭ್ಯರ್ಥಿಗಳ ದಾಖಲೆ ಪರಿಶೀಲನೆ ಸಮಯದಲ್ಲಿ ತಪ್ಪದೇ ಸಲ್ಲಿಸತಕ್ಕದ್ದು.

ii) ಹುದ್ದೆಗಳಿಗೆ ನಿಗದಿಪಡಿಸಿರುವ ಅನುಭವಕ್ಕೆ ಸಂಬಂಧಿಸಿದಂತೆ ವಿದ್ಯಾರ್ಹತೆಯನ್ನು ಪೂರ್ಣಗೊಳಿಸಿದ ನಂತರ (Post qualification) ಪಡೆದ ಅನುಭವದ ಪ್ರಮಾಣ ಪತ್ರವನ್ನು ಸಲ್ಲಿಸುವುದು.

iii) ಜಾತಿ, ವಿದ್ಯಾರ್ಹತೆ ಹಾಗೂ ಇತರ ಪ್ರಮಾಣಪತ್ರಗಳ ನೈಜತೆಯ ಆಧಾರದ ಮೇಲೆ ನೇಮಕಾತಿಯ ಮುಂದಿನ ಕ್ರಮಕ್ಕೆ ಪರಿಗಣಿಸಲಾಗುವುದು.

**ಅಧಿಸೂಚಿಸಲಾಗಿರುವ ಹುದ್ದೆಗಳ ನೇಮಕಾತಿಗಾಗಿ ಯಾವುದೇ ವಿಧವಾದ ಸಂದರ್ಶನ ಇರುವುದಿಲ್ಲ.**

## 8. ಕನ್ನಡ ಭಾಷಾ ಪರೀಕ್ಷೆ:

- ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಕನ್ನಡ ಭಾಷೆಯನ್ನು ಒಂದು ವಿಷಯವಾಗಿ ಅಭ್ಯಾಸ ಮಾಡದಿದ್ದಲ್ಲಿ ಅಂತಹ ಅಭ್ಯರ್ಥಿಗಳು ನಿಗಮದಿಂದ ನಡೆಸಲಾಗುವ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣ ಹೊಂದಬೇಕಾಗುತ್ತದೆ.
- ಕನ್ನಡ ಭಾಷಾ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ಅಭ್ಯರ್ಥಿಗಳನ್ನು ಮಾತ್ರ ಆಯ್ಕೆ ಪ್ರಕ್ರಿಯೆಗೆ ಪರಿಗಣಿಸಲಾಗುವುದು.
- ಕನ್ನಡ ಭಾಷಾ ಪರೀಕ್ಷೆಯ ದಿನಾಂಕ ಮತ್ತು ಸ್ಥಳವನ್ನು ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

## 9. ದಾಖಲೆಗಳ ಪರಿಶೀಲನೆ:

ಮೆರಿಟ್ ಆಧಾರದ ಮೇಲೆ ದಾಖಲೆಗಳ ಪರಿಶೀಲನೆಗಾಗಿ ಕರೆದಾಗ ಅಭ್ಯರ್ಥಿಗಳು ಈ ಕೆಳಕಂಡ ಮೂಲ ದಾಖಲೆಗಳ ಜೊತೆಗೆ – ಸ್ವಯಂದೃಢೀಕೃತ (Self attested) ಜೆರಾಕ್ಸ್ ಪ್ರತಿ ಮತ್ತು ಇತ್ತೀಚಿನ ಭಾವಚಿತ್ರಗಳೊಂದಿಗೆ ಹಾಜರಾಗತಕ್ಕದ್ದು.

ಎ) ವಯಸ್ಸು, ವಿದ್ಯಾರ್ಹತೆ ಮತ್ತು ಮೀಸಲಾತಿ ಇತ್ಯಾದಿಗಳಿಗೆ ಸಂಬಂಧಪಟ್ಟಂತೆ ಈ ಕೆಳಕಂಡ ಮೂಲ ದಾಖಲೆಗಳನ್ನು ಹಾಜರುಪಡಿಸುವುದು.

i) ಜನ್ಮ ದಿನಾಂಕಕ್ಕೆ ಆಧಾರವಾಗಿ ಹಾಗೂ ಜೇಷ್ಠತೆಯನ್ನು ನಿರ್ಧರಿಸಲು ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ

ii) ಡಿಪ್ಲೋಮಾ/ಪದವಿ ಪ್ರಮಾಣ ಪತ್ರ (Diploma/ Degree Certificates) Convocation, ಮತ್ತು ಎಲ್ಲಾ ಪರೀಕ್ಷೆಗಳ(ಪ್ರತಿ ವರ್ಷ/ಪ್ರತಿ ಸೆಮಿಸ್ಟರ್‌ಗಳ) ಅಂಕಪಟ್ಟಿಗಳು.

iii) ಇನ್‌ಸ್ಟಿಟ್ಯೂಟ್ ಆಫ್ ಕಾಸ್ಟ್ & ವರ್ಕ್ಸ್ ಅಕೌಂಟ್ಸ್ ಆಫ್ ಇಂಡಿಯಾ (ಐಸಿಡಬ್ಲ್ಯೂಎ) ಅಥವಾ ಚಾರ್ಟ್‌ರ್ಡ್ ಅಕೌಂಟೆಂಟ್ ಪದವಿ ಪ್ರಮಾಣ ಪತ್ರ ಮತ್ತು ಅಂಕಪಟ್ಟಿಗಳು.

iv) ಇನ್‌ಸ್ಟಿಟ್ಯೂಟ್ ಆಫ್ ಕಾಸ್ಟ್ & ವರ್ಕ್ಸ್ ಅಕೌಂಟ್ಸ್ ಆಫ್ ಇಂಡಿಯಾ (ಐಸಿಡಬ್ಲ್ಯೂಎ) ಅಥವಾ ಚಾರ್ಟ್‌ರ್ಡ್ ಅಕೌಂಟೆಂಟ್ ಸದಸ್ಯತ್ವ ಪ್ರಮಾಣ ಪತ್ರ

v) ತರಬೇತಿ / ಅನುಭವ ಪ್ರಮಾಣ ಪತ್ರ

vi) ಅಭ್ಯರ್ಥಿಯ ಕೋರಿಕೆಗೆ ಸಂಬಂಧಿಸಿದ ಇತರೆ ಪ್ರಮಾಣ ಪತ್ರಗಳು.

vii) ಅಭ್ಯರ್ಥಿಯು ಯಾವುದೇ ಸಂಸ್ಥೆಯಲ್ಲಿ ಈಗಾಗಲೇ ಕಾರ್ಯನಿರ್ವಹಿಸುತ್ತಿದ್ದಲ್ಲಿ ಅಂತಹವರು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಯಿಂದ ನಿರಾಕ್ಷೇಪಣ ಪತ್ರ. (No Objection Certificate). ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಹಾಗೂ ಅವರ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು (No Objection Certificate) ಸಂಬಂಧಿತ ನೇಮಕಾತಿ ಪ್ರಾಧಿಕಾರದಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರಬೇಕು.

ಬಿ) **ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ** ಅಭ್ಯರ್ಥಿಗಳು **ನಮೂನೆ–ಡಿ** ಪ್ರಮಾಣ ಪತ್ರಗಳನ್ನು ಕರ್ನಾಟಕ ಸರ್ಕಾರದ ಆದೇಶ/ನಿರ್ದೇಶನಗಳ ಪ್ರಕಾರ ಸಲ್ಲಿಸುವುದು, ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕಕ್ಕೆ ಮುಂಚಿತವಾಗಿ ಮಾನ್ಯವಾದ ಪ್ರಮಾಣ ಪತ್ರಗಳನ್ನು ಹೊಂದಿರತಕ್ಕದ್ದು.

ಸಿ) **ವಿಕಲಚೇತನ(ದಿವ್ಯಾಂಗರು) ಅಭ್ಯರ್ಥಿ:**
ಸರ್ಕಾರದ ಜ್ಞಾಪನಾ ಪತ್ರ ಸಂಖ್ಯೆ: ಸಿಆಸುಇ 115 ಎಸ್‌ಆರ್‌ಆರ್ 2005 ಬೆಂಗಳೂರು ದಿನಾಂಕ: 19.11.2005.

ಡಿ) **ಮಾಜಿ ಸೈನಿಕ ಅಭ್ಯರ್ಥಿ :**
ಕರ್ತವ್ಯ ಬಿಡುಗಡೆ ಪತ್ರ (Discharge Certificate) ಸಲ್ಲಿಸುವುದು.

**ಈ ಮೇಲೆ ತಿಳಿಸಲಾದ ಪ್ರಮಾಣ ಪತ್ರಗಳನ್ನು ಅಭ್ಯರ್ಥಿಯು ಸಲ್ಲಿಸದಿದ್ದಲ್ಲಿ ಅಯ್ಕೆಗೆ ಪರಿಗಣಿಸಲಾಗುವುದಿಲ್ಲ.**

**ಸೂಚನೆ: ಈ ಮೇಲಿನ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕರೊಳಗೆ ಪಡೆದಿರಬೇಕು ಹಾಗೂ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು. ಅವಧಿ ಮೀರಿದ ಅಥವಾ ಚಾಲ್ತಿಯಲ್ಲಿ ಇರದೆ ಇರುವ ಪ್ರಮಾಣ ಪತ್ರಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸುವುದಿಲ್ಲ. ಅಂತಹ ಪ್ರಮಾಣ ಪತ್ರಗಳನ್ನು ಹಾಜರುಪಡಿಸಿದಾಗ ಅಭ್ಯರ್ಥಿತ್ವವು ಅಸಿಂಧುವಾಗುತ್ತದೆ.**
**ಈ ಮೇಲೆ ನಮೂದಿಸಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ. ಪ್ರಮಾಣ ಪತ್ರಗಳನ್ನು ನೇಮಕಾತಿ ಪ್ರಾಧಿಕಾರ ಪರಿಶೀಲಿಸುವ ಸಂದರ್ಭದಲ್ಲಿ ತಪ್ಪದೆ ಹಾಜರುಪಡಿಸತಕ್ಕದ್ದು. ಇದಕ್ಕೆ ಹೆಚ್ಚಿನ ಕಾಲಾವಕಾಶ ನೀಡಲಾಗುವುದಿಲ್ಲ. ಅರ್ಹತೆ, ಮೀಸಲಾತಿ ಇತ್ಯಾದಿಗಳ ಬಗ್ಗೆ ಅಭ್ಯರ್ಥಿಯು ಖಾತ್ರಿ ಪಡಿಸಿಕೊಂಡು ಅರ್ಜಿ ಸಲ್ಲಿಸುವುದು ಅವರ ವೈಯಕ್ತಿಕ ಜವಾಬ್ದಾರಿಯಾಗಿರುತ್ತದೆ.ತಪ್ಪು ಮಾಹಿತಿ ನೀಡಿದ್ದಲ್ಲಿ ನೇಮಕಾತಿಗೆ ಅರ್ಹರಾಗುವುದಿಲ್ಲ.**

**ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ ಅಭ್ಯರ್ಥಿಯು ಆ ಹುದ್ದೆಗೆ ಸಲ್ಲಿಸಿದ ಕೊನೆಯ ಅರ್ಜಿಯನ್ನು ನೇಮಕಾತಿಯ ಮುಂದಿನ ಕ್ರಮಗಳಿಗೆ ಪರಿಗಣಿಸಲಾಗುವುದು ಮತ್ತು ಬಾಕಿ ಉಳಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.**

**10.** ದಾಖಲಾತಿಗಳ ಪರಿಶೀಲನೆ ಅಥವಾ ಕನ್ನಡ ಬಾಷಾ ಪರೀಕ್ಷೆಗಾಗಿ ಹಾಜರಾಗಬೇಕಾದ ಸಂದರ್ಭದಲ್ಲಿ ನಿಗಮದಿಂದ ಅಭ್ಯರ್ಥಿಗಳಿಗೆ ಯಾವುದೇ ಪ್ರಯಾಣ/ದಿನಭತ್ಯೆ (**TA/DA**) ನೀಡಲಾಗುವುದಿಲ್ಲ.

**11. ಪ್ರಮುಖ ಸೂಚನೆಗಳು:**

ಅಭ್ಯರ್ಥಿಗಳು ಈ ಕೆಳಕಂಡ ದಾಖಲಾತಿಗಳನ್ನು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕರೊಳಗಾಗಿ ಪಡೆದಿರಬೇಕು, ಆಯ್ಕೆ ಪ್ರಾಧಿಕಾರವು ಸೂಚಿಸಿದಾಗ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗುವುದು.

1. ಕಡ್ಡಾಯವಾಗಿ ಹಾಜರು ಪಡಿಸಬೇಕಾದ ವಿದ್ಯಾರ್ಹತೆ/ ಜನ್ಮ ದಿನಾಂಕ/ ಅನುಭವ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿದ್ದಲ್ಲಿ ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.
2. ರಾಜ್ಯ ಸರ್ಕಾರಿ/ ಕೇಂದ್ರ ಸರ್ಕಾರಿ/ ಸ್ಥಳೀಯ ಪ್ರಾಧಿಕಾರ ನೌಕರರು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪತ್ರವನ್ನು ಒದಗಿಸಬೇಕು ಇಲ್ಲದಿದ್ದಲ್ಲಿ ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.
3. ಶೈಕ್ಷಣಿಕ ಅರ್ಹತಾ ಪರೀಕ್ಷೆಗೆ ಕುಳಿತಿರುವ ಮತ್ತು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕರೊಳಗಾಗಿ ಫಲಿತಾಂಶ ಪ್ರಕಟವಾಗದೆ ಇರುವ ಸಂದರ್ಭದಲ್ಲಿ ಅಂತಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

**12. ಹೆಚ್ಚುವರಿ ಸೂಚನೆಗಳು:**

1. ಅಭ್ಯರ್ಥಿಗಳು ಅರ್ಜಿಗಳಲ್ಲಿ ನೀಡುವ ಮಾಹಿತಿಗಳು **i.e.,** ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.
2. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ ಹಾಗೂ ವಯೋಮಿತಿ ಸಡಿಲಿಕೆ, ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಕೊನೆಯ ದಿನಾಂಕದ ನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.
3. ನಿಗಮವು ಈ ನೇಮಕಾತಿಯನ್ನು ಭಾಗಶಃ/ ಪೂರ್ಣವಾಗಿ ಯಾವುದೇ ಹಂತದಲ್ಲಿ ಯಾವುದೇ ಕಾರಣ ನೀಡದೆ ರದ್ದುಪಡಿಸುವ ಸಂಪೂರ್ಣ ಅಧಿಕಾರವನ್ನು ನಿಗಮವು ಹೊಂದಿರುತ್ತದೆ.
4. ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ನಿಗಮದ ನಿರ್ಧಾರವೇ ಅಂತಿಮವಾಗಿರುತ್ತದೆ.
5. ಸದರಿ ನೇಮಕಾತಿ ಅಧಿಸೂಚನೆಗೆ ಸಂಬಂಧಿಸಿದಂತೆ ಯಾವುದೇ ಕಾನೂನಾತ್ಮಕ ವಿವಾದಗಳು ಬೆಂಗಳೂರು ನಗರದಲ್ಲಿರುವ ನ್ಯಾಯಾಲಯದ ವ್ಯಾಪ್ತಿಗೆ ಮಾತ್ರ ಒಳಪಟ್ಟಿರುತ್ತದೆ.
6. ನೇಮಕಾತಿ ಪ್ರಕ್ರಿಯೆಯಲ್ಲಿ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಆಸ್ಪದವಿರುವುದಿಲ್ಲ. ಈ ಪ್ರಕ್ರಿಯೆಗೆ ಸಂಬಂಧಿಸಿದಂತೆ ಎಲ್ಲ ವಿವರಗಳನ್ನು ನಿಗಮದ ಅಧೀಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

**13. ದುರ್ನಡತೆ**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಹೊಂದಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ ನೇಮಕಾತಿಗೆ ಅನರ್ಹರಾಗುತ್ತಾರೆ.

ಪ್ರಸ್ತುತ ಅಧಿಸೂಚಿಸಲಾಗಿರುವ ಹುದ್ದೆಗಳ ನೇಮಕಾತಿಯು ಪಾರದರ್ಶಕವಾಗಿರುವುದರಿಂದ ಯಾವುದೇ ಅನಧಿಕೃತ ವ್ಯಕ್ತಿಗಳು ನೇಮಕಾತಿ ಪ್ರಕ್ರಿಯೆ, ಸ್ಥಳ ನಿಯೋಜನೆ ಮತ್ತು ಇನ್ನು ಮುಂತಾದ ವಿಷಯಗಳ ಸಂಬಂಧ ದಾಖಲಾತಿಗಳನ್ನು ಸಲ್ಲಿಸುವಂತೆ/ಹಣ ಪಾವತಿಸುವಂತೆ ಯಾವುದೇ ಇ-ಮೇಲ್, ದೂರವಾಣಿ ಕರೆ, ಸಂದೇಶ ಅಥವಾ ಖುದ್ದಾಗಿ ಸಂಪರ್ಕಿಸುವುದಾಗಲೀ ಮಾಡಿದ್ದಲ್ಲಿ ಕೂಡಲೇ **ನಿರ್ದೇಶಕರು(ಮಾ.ಸಂ.), ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, 4ನೇ ಮಹಡಿ, ನಂ.82, ಶಕ್ತಿಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು–01** ಇವರಲ್ಲಿ ಲಿಖಿತವಾಗಿ ಮನವಿಯನ್ನು ಸಲ್ಲಿಸಲು ತಿಳಿಸಲಾಗಿದೆ. ಒಂದು ವೇಳೆ ಯಾವುದೇ ಅಭ್ಯರ್ಥಿಯು ಅನಧಿಕೃತ ವ್ಯಕ್ತಿಗಳಿಗೆ ದಾಖಲಾತಿಗಳನ್ನು ಸಲ್ಲಿಸಿದ್ದಲ್ಲಿ ಮತ್ತು ಹಣ ಪಾವತಿಸಿದ್ದಲ್ಲಿ ನಿಗಮವು ಜವಾಬ್ದಾರಿಯಾಗಿರುವುದಿಲ್ಲ. ನೇಮಕಾತಿ ವಿಷಯದಲ್ಲಿ ಅಭ್ಯರ್ಥಿಗಳಿಗೆ ಯಾವುದೇ ರೀತಿಯ ಆಮಿಷ ತೋರಿಸುವುದು/ವಂಚನೆ ಮಾಡುವವರು ಕಂಡುಬಂದಲ್ಲಿ ಅಂತಹವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.

**sd/-**
**ನಿರ್ದೇಶಕರು(ಮಾ.ಸಂ.)**